**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–83)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಅಧಿನಿಯಮ, 2022ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಅಧಿನಿಯಮ, 2022 (2023ರ ಕರ್ನಾಟಕ ಅಧಿನಿಯಮ 06)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 2ರ ತಿದ್ದುಪಡಿ.-** ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಅಧಿನಿಯಮ, 2022 (2023ರ ಕರ್ನಾಟಕ ಅಧಿನಿಯಮ 06)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 2ನೇ ಪ್ರಕರಣದ, (ಸಿಸಿ) ಖಂಡದಲ್ಲಿ, " ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ 53)ರಲ್ಲಿ ಪರಿಭಾಷಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು" ಎಂಬ ಪದಗಳು, ಅಂಕಗಳು ಮತ್ತು ಆವರಣ ಚಿಹ್ನೆಗಳ ಬದಲಾಗಿ "ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ 36) ರಲ್ಲಿ ಪರಿಭಾಷಿಸಿದಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು" ಎಂಬ ಪದಗಳು, ಅಂಕಗಳು ಮತ್ತು ಆವರಣ ಚಿಹ್ನೆಗಳನ್ನು ಪ್ರತಿಯೋಜಿಸತಕ್ಕದ್ದು.

**3. ಪ್ರಕರಣ 4ರ ತಿದ್ದುಪಡಿ.-** ಮೂಲ ಅಧಿನಿಯಮದ, 4ನೇ ಪ್ರಕರಣದ, (1)ನೇ ಉಪಪ್ರಕರಣದಲ್ಲಿರುವ ಪಟ್ಟಿಯಲ್ಲಿ,-

(i) ಖಂಡ(ಜೆ) ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳ ಬದಲಾಗಿ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"

| | | |
|---|---|---|
| (ಜೆ) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿನ ನಗರ ಪಾಲಿಕೆಗಳ ಮಹಾಪೌರರು; | ಪದನಿಮಿತ್ತ ಸದಸ್ಯರು |

"

(ii) ಖಂಡ (ಎನ್) ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳ ಬದಲಾಗಿ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"

| | | |
|---|---|---|
| (ಎನ್) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿನ ನಗರ ಪಾಲಿಕೆಗಳ ಆಯುಕ್ತರು; | ಪದನಿಮಿತ್ತ ಸದಸ್ಯರು |

"

(iii) ಹಾಗೆ ಪ್ರತಿಯೋಜಿಸಿದ ಖಂಡ (ಎನ್) ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"

| | | |
|---|---|---|
| (ಎನ್-1) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ನಗರ ಯೋಜಕರು; | ಪದನಿಮಿತ್ತ ಸದಸ್ಯರು |
| (ಎನ್-2) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿನ ನಗರ ಪಾಲಿಕೆಗಳ ಅಪರ ಮುಖ್ಯ ನಗರ ಯೋಜಕರು; | ಪದನಿಮಿತ್ತ ಸದಸ್ಯರು |

"

**4. ಪ್ರಕರಣ 12ರ ತಿದ್ದುಪಡಿ.-** ಮೂಲ ಅಧಿನಿಯಮದ, 12ನೇ ಪ್ರಕರಣದ, (1)ನೇ ಉಪಪ್ರಕರಣದಲ್ಲಿರುವ ಪಟ್ಟಿಯಲ್ಲಿ,-

(i) ಖಂಡ (ಸಿ)ರ ಬದಲಾಗಿ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"

| | | |
|---|---|---|
| (ಸಿ) | ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ; | ಪದನಿಮಿತ್ತ ಸದಸ್ಯರು |

"

(ii) ಹಾಗೆ ಪ್ರತಿಯೋಜಿಸಿದ ಖಂಡ (ಸಿ) ತರುವಾಯ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"

| | | |
|---|---|---|
| (ಸಿ-1) | ಮುಖ್ಯ ನಗರ ಯೋಜಕರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ; | ಪದನಿಮಿತ್ತ ಸದಸ್ಯ |
| (ಸಿ-2) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿನ ನಗರ ಪಾಲಿಕೆಗಳ ಆಯುಕ್ತರು; | ಪದನಿಮಿತ್ತ ಸದಸ್ಯರು |
| (ಸಿ-3) | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗಿನ ನಗರ ಪಾಲಿಕೆಗಳ ಅಪರ ಮುಖ್ಯ ನಗರ ಯೋಜಕರು; | ಪದನಿಮಿತ್ತ ಸದಸ್ಯರು |

"

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಅಧಿನಿಯಮ, 2022 (2023ರ ಕರ್ನಾಟಕ ಅಧಿನಿಯಮ 06)ರಲ್ಲಿರುವ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಮತ್ತು ಕಾರ್ಯಕಾರಿ ಸಮಿತಿಯನ್ನು ಪರಿಷ್ಕರಿಸಲು,-

(1) ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ; ಮತ್ತು

(2) ಬಿಬಿಎಂಪಿಯ ಮುಖ್ಯ ಆಯುಕ್ತರು,

ಮತ್ತು ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 ಅಧಿನಿಯಮಿತಿಯ ತತ್ಪರಿಣಾಮವಾಗಿ ಗ್ರೇಟರ್ ಬೆಂಗಳೂರು ಪ್ರದೇಶದ ನಗರ ಪಾಲಿಕೆಗಳನ್ನು ಸೇರಿಸಲು, ಸದರಿ ಅಧಿನಿಯಮವನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಡಿ. ಕೆ. ಶಿವಕುಮಾರ್**
ಉಪ ಮುಖ್ಯಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

# ಅನುಬಂಧ
## ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕ, 2022ರ
## (2023ರ ಕರ್ನಾಟಕ ಅಧಿನಿಯಮ 06) ಉದ್ಧೃತ ಭಾಗ

**XXX XXX XXX**

**(2) ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,- **XXX XXX XXX**

(ಸಿಸಿ) "ನಗರ ಸ್ಥಳೀಯ ಸಂಸ್ಥೆ" ಎಂದರೆ, ಕರ್ನಾಟಕ ಮುನ್ಸಿಪಾಲಿಟಿಗಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 22)ರಲ್ಲಿ ಪರಿಭಾಷಿಸಿದಂತೆ ಪಟ್ಟಣ ಪಂಚಾಯಿತಿ ಮತ್ತು ಪಟ್ಟಣ ಅಥವಾ ನಗರ ಮುನ್ಸಿಪಲ್ ಕೌನ್ಸಿಲ್ ಮತ್ತು ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ, 1976 (1977ರ ಕರ್ನಾಟಕ ಅಧಿನಿಯಮ 14)ರಲ್ಲಿ ಪರಿಭಾಷಿಸಿದಂತೆ ನಗರ ಪಾಲಿಕೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ 53)ರಲ್ಲಿ ಪರಿಭಾಷಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಒಳಗೊಳ್ಳುತ್ತದೆ;

**XXX XXX XXX**

**4. ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರದ ರಚನೆ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಪ್ರಾರಂಭದ ತರುವಾಯ ಸಾಧ್ಯವಾದಷ್ಟು ಬೇಗನೆ, ಆದರೆ ಅದರ ಪ್ರಾರಂಭದ ದಿನಾಂಕದಿಂದ ಆರು ತಿಂಗಳುಗಳಿಗಿಂತ ವಿಳಂಬವಾಗದಂತೆ, ಅಧಿಸೂಚನೆಯ ಮೂಲಕ, ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡಿರುವ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ಸ್ಥಾಪಿಸತಕ್ಕದ್ದು, ಎಂದರೆ:-

**XXX XXX XXX**

| | | |
|---|---|---|
| (ಜೆ) | ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ; | ಪದನಿಮಿತ್ತ ಸದಸ್ಯರು |

**XXX XXX XXX**

| | | |
|---|---|---|
| (ಎನ್) | ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ; | ಪದನಿಮಿತ್ತ ಸದಸ್ಯರು |

**XXX XXX XXX**

**12. ಕಾರ್ಯಕಾರಿ ಸಮಿತಿಯ ರಚನೆ.-** (1) ಪ್ರಾಧಿಕಾರವು ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ರೀತಿಯಲ್ಲಿ ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವಲ್ಲಿ ನೆರವು ನೀಡಲು ಒಂದು ಕಾರ್ಯಕಾರಿ ಸಮಿತಿಯನ್ನು ರಚಿಸತಕ್ಕದ್ದು. ಕಾರ್ಯಕಾರಿ ಸಮಿತಿಯು ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

**XXX XXX XXX**

| | | |
|---|---|---|
| (ಸಿ) | ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಪದ-ನಿಮಿತ್ತ ಸದಸ್ಯರು |

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 71, ಪ್ರತಿಗಳು 250, 17ನೇ ಡಿಸೆಂಬರ್ 2025